ಮಂಡ್ಯ-ಚೀರನಹಳ್ಳಿ-ತಗ್ಗಹಳ್ಳಿ-ಕಾಡುಕೊತ್ತನಹಳ್ಳಿ ಮಳವಳ್ಳಿ ರಸ್ತೆಯನ್ನು ಎಂ.ಡಿ.ಆರ್. ಆಗಿ ಪರಿವರ್ತಿಸುವುದು

1739 (2460) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ವಿ.ಆರ್. ಗಳನ್ನು ಎಂ.ಡಿ.ಆರ್. ಗಳನ್ನಾಗಿ ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ?

ಆ) ಮಂಡ್ಯಚೀರನಹಳ್ಳಿ-ತಗ್ಗಹಳ್ಳಿ-ಕಾಡುಕೊತ್ತನಹಳ್ಳಿ-ಮಳವಳ್ಳಿ ರಸ್ತೆಯನ್ನು ಎಂ.ಡಿ.ಆರ್. ಆಗಿ ಪರಿವರ್ತಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಇ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಪ್ರಸ್ತಾವನೆಗಳು ಪರಿಶೀಲನೆಯಲ್ಲಿದೆ.

ಆ) ಪರಿಶೀಲಿಸಲಾಗುವುದು.

ಇ) ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಪರಿಶೀಲನೆಯ ಹಂತದಲ್ಲಿರುತ್ತದೆ. ಇನ್ನೂ ಯಾವುದೇ ಅಂತಿಮ ನಿರ್ಧಾರ ಕೈಗೊಂಡಿರುವುದಿಲ್ಲ.

ಮಂಡ್ಯ ನಗರ ಸಭಾ ವ್ಯಾಪ್ತಿಯಲ್ಲಿ 94-C ಅರ್ಜಿಗಳನ್ನು ಪರಿಗಣಿಸುವುದು

1760 (2461) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರ ಸಭೆಯ ವ್ಯಾಪ್ತಿಯಲ್ಲಿ ಸರ್ಕಾರಿ ಭೂಮಿಯಲ್ಲಿ ಕಳೆದ ಹತ್ತಾರು ವರ್ಷಗಳಿಂದ ವಾಸ ಮಾಡಿಕೊಂಡಿರುವವರು ಫಾರಂ "94-ಸಿ" ಅರ್ಜಿ ಹಾಕಿರುವವರ ಸಂಖ್ಯೆಯೆಷ್ಟು;

ಆ) ಈ ಅರ್ಜಿಗಳ ಸಂಬಂಧವಾಗಿ ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ;

ಇ) ಅರ್ಜಿಗಳನ್ನು ಪರಿಷ್ಕರಿಸಿದ್ದಲ್ಲಿ ಇವರಿಗೆ ಹಕ್ಕು ಪತ್ರವನ್ನು ಯಾವಾಗ ನೀಡಲಾಗುವುದು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಮಂಡ್ಯ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಯ ದೇವಾಲಯಗಳ ಅಭಿವೃದ್ಧಿ

1741 (2462) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಾದ್ಯಂತ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಬರುವ ದೇವಸ್ಥಾನಗಳು ಯಾವುವು?

ಆ) ಈ ದೇವಸ್ಥಾನಗಳ ಅಭಿವೃದ್ಧಿಗಾಗಿ ಸರ್ಕಾರ ಈವರೆವಿಗೆ ಕೈಗೊಂಡಿರುವ ಕ್ರಮಗಳೇನು;

ಇ) ಕಾಮಗಾರಿಗಳಿಗೆ ಇದುವರೆಗೆ ಆದ ವೆಚ್ಚವೆಷ್ಟು;